ಎರಡನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಮ.ಎಫ್.ಸಿ
ನ್ಯಾಯಾಲಯ ಬೀದರ್
ಸಿ.ಸಿ.ನಂ. 2272–2022

ಪ್ರಾಸಾ–5
ಚಾಸಾ–3
ದಿಃ 22–11–2023

| | | |
|---|---|---|
| ಹೆಸರು | ಃ | ಲೋಕೆಶ್ |
| ತಂದೆ ಹೆಸರು | ಃ | ಲಕ್ಷ್ಮಣ |
| ವಯಸು | : | 35 |
| ಉದ್ಯೋಗ | ಃ | ಚಾಲಕ |
| ವಾಸ ಸ್ಥಳ | ಃ | ನವದಗೇರಿ. |

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತ್ತು

ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಅಭಿಯೋಜಕರವರಿಂದಃ

ಚಾಸಾ 2 ಗೊತ್ತು. ಆರೋಪಿತರ ಪರಿಚಯವಿಲ್ಲ. ಸುಮಾರು 1 ವರ್ಷದ ಹಿಂದೆ ಪೋಲಿಸ್ ಠಾಣೆಯಲ್ಲಿ ಪೋಲಿಸರು ನನ್ನ ಸಹಿ ಪಡೆದು ಪಂಚನಾಮೆಯನ್ನು ನನ್ನ ಸಮಕ್ಷಮ ಮಾಡಿರುವುದಿಲ್ಲ. ಆದರೆ ಕೆಲವೊಂದು ದಾಖಲೆಗಳ ಮೇಲೆ ನನ್ನ ಸಹಿ ಪಡೆದಿರುತ್ತಾರೆ. ಗುನ್ಹೆ ಸ್ಥಳ ಪಂಚನಾಮೆಯನ್ನು ಈಗಾಗಲೆ ನಿಪಿ 1 ಎಂದು ಗುರುತಿಸಲಾಗಿದ್ದು , ಸಾಕ್ಷಿಯ ಸಹಿಯನ್ನು ನಿಪಿ 1 (ಸಿ) ಎಂದು ಗುರುತಿಸಲಾಯಿತು. ಯಾವುದೇ ವಸ್ತುಗಳನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಹಿರಿಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟಿ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿಸಲಾಯಿತು)

ಪಾಟಿ ಸವಾಲು: ಹಿರಿಯ ಅಭಿಯೋಜಕರಿಂದ

ದಿ. 18–02–2022 ರಂದು 17.45 ರಿಂದ 18.45 ಗಂಟೆಯವರೆಗೆ ಬೀದರ್ ಕೇಂದ್ರ ಬಸ್ ನಿಲ್ದಾಣದ ಹತ್ತಿರ ಸಾಯಿ ಪ್ಯಾಲೆಸ್ ಲಾಡ್ಜ್‌ನಲ್ಲಿ ವೇಶ್ಯಾವಾಟಿಕೆಗೆ ಸಂಬಂಧ ಪಟ್ಟಂತೆಹ ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಪೊಲೀಸರು ಲಾಡ್ಜ್‌ನಲ್ಲಿ ಪಂಚನಾಮೆ ಮಾಡಿದ್ದಾರೆ ಅಂದರೆ ಸರಿಯಲ್ಲ. ಈಗ ವಿವರವಾಗಿ ಓದಿ ಹೇಳಿದಂತೆ ನಿಪಿ 1 ರಂತೆ ಪಂಚನಾಮೆ ಮಾಡಿದ್ದರು ಸಹಿತ ನಿಪಿ 1 ರಂತೆ ಈ ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ – ಇಲ್ಲ.

(ನನ್ನ ಉಕ್ತ ಲೇಖನದ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಕಂಪ್ಯೂಟರ್ ಮೇಲೆ ಬೆರಳಚ್ಚು ಮಾಡಲಾಗಿದೆ.)
ಓ.ಹೆ.ಕೆ.ಸರಿ.ಇದೆ,

ಎರಡನೇ ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ ಮತ್ತು
ಜೆ.ಎಮ.ಎಫ.ಸಿ ಬೀದರ .